


ಅಭಿಮಾನಿಗಳೊಂದಿಗೆ ಯುವ ಕ್ರಿಕೆಟಿಗ ಸಚಿನ್ ಬೇಬಿ ಸೆಲ್ಫಿ ಸಂಭ್ರಮ

ಭಾರತ 2007ರಲ್ಲಿ ಜಯಿಸಿದ್ದ ಟ್ರೋಫಿಯ ಸಾಧನೆ ಈ ಬಾರಿಯೂ ಪುನರಾವರ್ತಿಸಬಹುದು ಎನ್ನುವ ನಿರೀಕ್ಷೆ ಬಲವಾಗಿದೆ.

ವಿಶ್ವಕಪ್‌ನಲ್ಲಿ ವೆಸ್ಟ್ ಇಂಡೀಸ್ ಮಾತ್ರ ಎರಡು ಬಾರಿ ಚಾಂಪಿಯನ್ ಆದ ಏಕೈಕ ತಂಡವೆನಿಸಿದೆ. ದಕ್ಷಿಣ ಆಫ್ರಿಕಾ ಹಾಗೂ ನ್ಯೂಜಿಲೆಂಡ್ ತಂಡಗಳು ತಲಾ ಎರಡು ಬಾರಿ ಸೆಮಿಫೈನಲ್‌ನಲ್ಲಿ ಮುಗ್ಗರಿಸಿವೆ. 2016ರ ಕೊನೆಯ ಟೂರ್ನಿಯಲ್ಲಿ ಮಹೇಂದ್ರ ಸಿಂಗ್ ಧೋನಿ ನಾಯಕತ್ವದ ಭಾರತ ಸೆಮಿಫೈನಲ್‌ನಲ್ಲಿ ಸೋತಿತ್ತು. ಟಿ–20 ವಿಶ್ವಕಪ್‌ನಲ್ಲಿ ವಿರಾಟ್ ಕೊಹ್ಲಿ ಮೊದಲ ಬಾರಿಗೆ ತಂಡವನ್ನು ಮುನ್ನಡೆಸುತ್ತಿದ್ದಾರೆ. ಅವರಿಗೆ ಚುಟುಕು ಕ್ರಿಕೆಟ್‌ನ ದೈತ್ಯ ವೆಸ್ಟ್ ಇಂಡೀಸ್ ತಂಡವನ್ನು ಮಣಿಸುವ ಸವಾಲು ಇದೆ. ಸಾಂಪ್ರದಾಯಿಕ ಎದುರಾಳಿ ಭಾರತ ಮತ್ತು ಪಾಕಿಸ್ತಾನ ತಂಡಗಳು ಒಂದೇ ಗುಂಪಿನಲ್ಲಿರುವುದು ಕ್ರಿಕೆಟ್ ಪ್ರೇಮಿಗಳ ಉತ್ಸಾಹ ಹೆಚ್ಚಿಸಿದೆ.

ಒಟ್ಟು 16 ತಂಡಗಳು ಟೂರ್ನಿಯಲ್ಲಿ ಭಾಗವಹಿಸಲಿವೆ. 2018ರ ಡಿಸೆಂಬರ್ ಅಂತ್ಯದ ವೇಳೆಗೆ ಮೊದಲ ಹತ್ತು ಸ್ಥಾನಗಳನ್ನು ಹೊಂದಿದ್ದ ಭಾರತ, ಪಾಕಿಸ್ತಾನ, ಆಸ್ಟ್ರೇಲಿಯಾ, ಇಂಗ್ಲೆಂಡ್, ದಕ್ಷಿಣ ಆಫ್ರಿಕಾ, ನ್ಯೂಜಿಲೆಂಡ್, ವೆಸ್ಟ್ ಇಂಡೀಸ್, ಅಫ್ಗಾನಿಸ್ತಾನ, ಶ್ರೀಲಂಕಾ ಮತ್ತು ಬಾಂಗ್ಲಾದೇಶ ತಂಡಗಳು ನೇರವಾಗಿ ಅರ್ಹತೆ ಪಡೆದುಕೊಂಡಿವೆ.

2019ರಲ್ಲಿ ನಡೆದ ವಿಶ್ವಕಪ್ ಅರ್ಹತಾ ಟೂರ್ನಿಯಲ್ಲಿ ಆಡಿ ಉತ್ತಮ ಪ್ರದರ್ಶನ ತೋರಿರುವ ನೆದರ್ಲೆಂಡ್ಸ್, ಪಪುವಾ ನ್ಯೂ ಗಿನಿ, ಐರ್ಲೆಂಡ್, ನಮೀಬಿಯಾ, ಸ್ಕಾಟ್ಲೆಂಡ್ ಮತ್ತು ಓಮನ್ ಕೂಡ ವಿಶ್ವಕಪ್‌ನಲ್ಲಿ ಪಾಲ್ಗೊಳ್ಳಲಿವೆ. ಪಪುವಾ ನ್ಯೂಗಿನಿ ಮೊದಲ ಬಾರಿಗೆ ಐಸಿಸಿಯ ವಿಶ್ವಕಪ್ ಟೂರ್ನಿಯೊಂದಕ್ಕೆ ಅರ್ಹತೆ ಪಡೆದುಕೊಂಡಿದ್ದು ವಿಶೇಷ.

2007ರಲ್ಲಿ ಮೊದಲ ಬಾರಿಗೆ ಟಿ–20 ವಿಶ್ವಕಪ್ ನಡೆದಿತ್ತು. ಆಗಿನಿಂದ ಐಸಿಸಿ ಪ್ರತಿ ಎರಡು ವರ್ಷಗಳಿಗೊಮ್ಮೆ ಟೂರ್ನಿ ಆಯೋಜಿಸುತ್ತಾ ಬಂದಿದೆ. 2020ರಲ್ಲಿ ಆಸ್ಟ್ರೇಲಿಯಾದಲ್ಲಿ ಈ ಟೂರ್ನಿ ಸಂಘಟಿಸಿತ್ತಾದರೂ, ಕೋವಿಡ್ ಕಾರಣದಿಂದಾಗಿ ಮುಂದೂಡಲಾಗಿತ್ತು. 2022ರ ಟೂರ್ನಿ ಆಸ್ಟ್ರೇಲಿಯಾದಲ್ಲಿ ನಡೆಯಲಿದೆ.

ಮೊದಲು ಈ ಟೂರ್ನಿಯಲ್ಲಿ 12 ತಂಡಗಳಷ್ಟೇ ಪಾಲ್ಗೊಳ್ಳುತ್ತಿದ್ದವು. ತಂಡಗಳ ಸಂಖ್ಯೆಯನ್ನು 2014ರಲ್ಲಿ 16ಕ್ಕೆ ಹೆಚ್ಚಿಸಲಾಯಿತು. ಕ್ರಿಕೆಟ್ ಆಡುವ ಎಲ್ಲಾ ರಾಷ್ಟ್ರಗಳು ಪ್ರತಿಷ್ಠಿತ ಟೂರ್ನಿಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಆಡುವಂತಾಗಬೇಕು ಎನ್ನುವ

## ಐಪಿಎಲ್ ಸ್ಟಾರ್

### ರಿಷಭ್ ಪಂತ್

ಭಾರತದ ಪ್ರಮುಖ ವಿಕೆಟ್ ಕೀಪರ್‌ಗಳಲ್ಲಿ ಒಬ್ಬರಾದ ರಿಷಭ್ ಪಂತ್ 2015–16ರ ರಣಜಿ ಟೂರ್ನಿಯಲ್ಲಿ ಪ್ರಥಮ ದರ್ಜೆ ಕ್ರಿಕೆಟ್‌ಗೆ ಪದಾರ್ಪಣೆ ಮಾಡಿದರು. ಮರುವರ್ಷದ ದೇಶಿ ಟೂರ್ನಿಯ ಮಹಾರಾಷ್ಟ್ರ ವಿರುದ್ಧದ ಪಂದ್ಯದಲ್ಲಿ ತ್ರಿಶತಕ ಬಾರಿಸಿ ಗಮನ ಸೆಳೆದಿದ್ದರು. ಜಾರ್ಖಂಡ್ ವಿರುದ್ಧದ ಪಂದ್ಯದಲ್ಲಿ ಕೇವಲ 48 ಎಸೆತಗಳಲ್ಲಿ ಶತಕ ಬಾರಿಸಿ ರಣಜಿಯಲ್ಲಿ ವೇಗವಾಗಿ ಶತಕ ಗಳಿಸಿದ ಗೌರವ ಸಂಪಾದಿಸಿದರು. ಇದರಿಂದಾಗಿ ಅವರಿಗೆ ದೆಹಲಿ ತಂಡದ ನಾಯಕತ್ವವೂ ಲಭಿಸಿತಲ್ಲದೇ, 2016ರ ಐಪಿಎಲ್‌ನಲ್ಲಿ ಡೆಲ್ಲಿ ಡೇರ್‌ಡೆವಿಲ್ಸ್ ತಂಡ 1.9 ಕೋಟಿಗೆ ಖರೀದಿಸಿತು.

2017ರಲ್ಲಿ ಇಂಗ್ಲೆಂಡ್ ವಿರುದ್ಧ ಟಿ–20 ಅಂತರರಾಷ್ಟ್ರೀಯ ಪಂದ್ಯ, 2018ರಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಏಕದಿನ ಮತ್ತು ಅದೇ ವರ್ಷ ಇಂಗ್ಲೆಮಡ್ ಎದುರು ಟೆಸ್ಟ್ ತಂಡಕ್ಕೆ ಪದಾರ್ಪಣೆ ಮಾಡಿದ್ದರು. ಇದುವರೆಗೆ 25 ಟೆಸ್ಟ್, 18 ಏಕದಿನ ಮತ್ತು 33 ಅಂತರರಾಷ್ಟ್ರೀಯ ಟಿ–20 ಪಂದ್ಯಗಳನ್ನಾಡಿದ್ದಾರೆ.

ಇವರಷ್ಟೇ ಅಲ್ಲದೆ ಹಾರ್ದಿಕ್ ಪಾಂಡ್ಯ, ಕೃನಾಲ್ ಪಾಂಡ್ಯ, ರುತುರಾಜ್ ಗಾಯಕ್ವಾಡ್, ಅಂಬಟಿ ರಾಯುಡು, ಪೃಥ್ವಿ ಷಾ, ಶ್ರೇಯಸ್ ಅಯ್ಯರ್, ಶಿವಮ್ ಮಣಿ, ಕೆ.ಎಲ್. ರಾಹುಲ್, ಕರುಣ್ ನಾಯರ್ ಮತ್ತು ರವಿಚಂದ್ರನ್ ಅಶ್ವಿನ್ ಹೀಗೆ ಅನೇಕ ಆಟಗಾರರಿಗೆ ಐಪಿಎಲ್ ಹಾಗೂ ದೇಶಿ ಟೂರ್ನಿಯ ಪಂದ್ಯಗಳು ದೊಡ್ಡ ಅವಕಾಶಗಳನ್ನು ಒದಗಿಸಿಕೊಟ್ಟಿವೆ. ಅಶ್ವಿನ್ 2017ರ ನಂತರ ಸೀಮಿತ ಓವರ್‌ಗಳ ಕ್ರಿಕೆಟ್‌ನಲ್ಲಿ ಆಡಿಲ್ಲವಾದರೂ ಐಪಿಎಲ್‌ನಲ್ಲಿ ತೋರಿದ ಪ್ರದರ್ಶನದಿಂದಾಗಿಯೇ ಟಿ–20 ವಿಶ್ವಕಪ್ ತಂಡಕ್ಕೆ ಆಯ್ಕೆ ಮಾಡಲಾಗಿದೆ.

